**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶ್ರೀಕಂಠೇಗೌಡ ರವರು ನಿಯಮ 330ರ ಅಡಿಯಲ್ಲಿ**

98

**ನೀಡಿರುವ ಸೂಚನೆಗೆ ಮಾನ್ಯ ಮುಖ್ಯಮಂತ್ರಿಗಳ ಹೇಳಿಕೆ**

ವಿಷಯ: ಮಾನ್ಯ ಮುಖ್ಯಮಂತ್ರಿಗಳ ಪತ್ರ ಸಂಖ್ಯೆ: CM/24855/2019 ದಿನಾಂಕ: 21.05.2019 ರ ಆದೇಶದಂತೆ ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ರೈತರು ವ್ಯವಸಾಯಕ್ಕಾಗಿ ಜಮೀನಿನಲ್ಲಿ ಕೊಳವೆಬಾವಿಗಳನ್ನು ಕೊರೆದಿದ್ದು, ಕೊಳವೆ ಬಾವಿಗಳಲ್ಲಿ ಸಾಕಷ್ಟು ನೀರು ಬಂದು, ಚಾ.ವಿ.ಸ.ನಿ.ನಿ.ಗೆ ಎರಡು ವರ್ಷಗಳ ಹಿಂದೆ ಹಣ ಪಾವತಿಸಿದ್ದರೂ ಇದುವರೆಗೂ ಐ.ಪಿ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸದೇ ಇರುವುದರಿಂದ ಬೆಳೆದ ಬೆಳೆಗಳಿಗೆ ನೀರಿಲ್ಲದೇ ಒಣಗಿ ಹೋಗುತ್ತಿದ್ದು ತುರ್ತಾಗಿ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ.

****

ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ರೈತರ ಜಮೀನಿನಲ್ಲಿ ಕೊರೆದಿರುವ ಕೊಳವೆಬಾವಿ ಕೃಷಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯ ಮೂಲಭೂತ ಸೌಕರ್ಯ ವಿದ್ಯುತ್ ವಿತರಣಾ ಜಾಲ ನಿರ್ಮಿಸಿ ರಾಜ್ಯ ಸರ್ಕಾರದ ಆದೇಶದಂತೆ ಹಣ ಪಾವತಿಸಿರುವ ರೈತರ ಜೇಷ್ಠತಾ ಪಟ್ಟಿ ತಯಾರಿಸಿ ಅದರಂತೆ ರೈತರ ನೀರಾವರಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ.

ಮದ್ದೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಸುಮಾರು **3434** ನೀರಾವರಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿಗಳನ್ನು ನಿರ್ವಹಿಸಲು ಸೆಸ್ಕ್ ನಲ್ಲಿಕಾರ್ಯದೇಶ ನೀಡಲಾಗಿರುತ್ತದೆ. ಆದರೆ ಸದರಿ ಕಾಮಗಾರಿಗಳ ಟೆಂಡರ್ ಪೂರ್ವ ಅರ್ಹತಾ ಶರತ್ತು/ನಿಬಂಧನೆಗಳಿಗೆ ಸಂಬಂಧಿಸಿದಂತೆ ಟಂಡರ್ ನಲ್ಲಿ ಭಾಗವಹಿಸಿರುವವರು/ಹೊಸದಾಗಿ ಭಾಗವಹಿಸಲು ಇಚ್ಚಿಸುವವರು ನ್ಯಾಯಾಲಯದ ಮೊರೆ ಹೋದ ಕಾರಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ನೀಡಿದ್ದ ಹಿನ್ನೆಲೆಯಲ್ಲಿ ಕಾಮಗಾರಿಗಳ ಕೆಲಸವು ಕುಂಠಿತವಾಗಿತ್ತು. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವತಿಯಿಂದ ದಿನಾಂಕ: 20.01.2020 ರಂದು ಮಾನ್ಯ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ತೆರವುಗೊಳಿಸಿರುತ್ತದೆ ಹಾಗೂ ಕಾಮಗಾರಿಗಳು ಪುನರಾರಂಭಗೊಂಡಿರುತ್ತವೆ. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವತಿಯಿಂದ ಮದ್ದೂರು ತಾಲ್ಲೂಕಿನಲ್ಲಿ ಕಾಮಗಾರಿಗಳನ್ನು ತ್ವರಿತವಾಗಿ ಕೈಗೊಳ್ಳಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

ಫೆಬ್ರವರಿ–2020 ರ ಅಂತ್ಯದವರೆಗೆ ಮದ್ದೂರು ತಾಲ್ಲೂಕಿನಲ್ಲಿ **8400** ಅರ್ಜಿಗಳು ನೊಂದಣಿಯಾಗಿದ್ದು ಈಗಾಗಲೇ **5415** ರೈತರ ನೀರಾವರಿ ಪಂಪ್ ಸೆಟ್ ಗಳಿಗೆ ವಿದ್ಯುತ್ ವಿತರಣಾ ಜಾಲದ ಮೂಲಭೂತ ಸೌಕರ್ಯದೊಂದಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಬಾಕಿ ಇರುವ **2985** ಅರ್ಜಿಗಳ ಕಾಮಗಾರಿಗಳನ್ನು 2020–21ನೇ ಸಾಲಿನಲ್ಲಿ ಪೂರ್ಣಗೊಳಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮವು ಕೈಗೊಂಡಿರುತ್ತದೆ.

ಎನರ್ಜಿ 92 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ

**(ಬಿ.ಎಸ್.ಯಡಿಯೂರಪ್ಪ)**

ಮುಖ್ಯಮಂತ್ರಿ